# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ | KANNADA POST | ಇದು ಸುದ್ದಿ ವಿಳಾಸ | ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 66 | Pages. 2 | Date: 08-02-2026, SUNDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 66 - ಪುಟಗಳು : 2 | 08-02-2026 | ಭಾನುವಾರ | Ph: 8762954248 | ದರ : ₹1


# ನನ್ನ ವಿರುದ್ಧ ಜೆಡಿಎಸ್ ಹಗೆತನ ಸಾಧಿಸುತ್ತಿದೆ

## ಅರಸೀಕೆರೆ ಶಾಸಕ ಕೆ.ಎಂ.ಶಿವಲಿಂಗೇಗೌಡ | ಸದನ ಗದ್ದಲಕ್ಕೆ ಸ್ಪಷ್ಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನನ್ನ ರಾಜಕೀಯ ಏಳಿಗೆ ಸಹಿಸಲಾಗದೆ ವಿಧಾನಸಭೆ ಅಧಿವೇಶನದಲ್ಲಿ ನನ್ನ ತೇಜೋವಧೆಗೆ ಯತ್ನ ನಡೆಯಿತು ಎಂದು ಅರಸೀಕೆರೆ ಶಾಸಕ ಕೆ.ಎಂ.ಶಿವಲಿಂಗೇಗೌಡ ಜೆಡಿಎಸ್ ನಾಯಕರತ್ತ ಬೊಟ್ಟು ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಶನಿವಾರ ಮಾತನಾಡಿ, ಷಡ್ಯಂತ್ರ ಇಲ್ಲದೆ ಸದನದಲ್ಲಿ ಆ ರೀತಿ ನಡೆಯುತ್ತಿರಲಿಲ್ಲ. ಜಿಲ್ಲೆಯಲ್ಲಿ ದೇವೇಗೌಡರನ್ನು ಬಿಟ್ಟು ಹೋದವರು ಯಾರೂ ಗೆಲ್ಲಲಿಲ್ಲ. ನಾನೊಬ್ಬ ಗೆದ್ದೆ ಅನ್ನೋ ಒಂದೇ ಕಾರಣಕ್ಕೆ ಮತ್ಸರ ಮಾಡಲಾಗುತ್ತಿದೆ ಎಂದರು.

ಹಿಂದೆ ದೇವೇಗೌಡರು ನಾನು ಬದುಕಿರುವವರೆಗೂ ಬಿಜೆಪಿ ಸಖ್ಯ ಮಾಡುವುದಿಲ್ಲ ಎಂದಿದ್ದರು, ಆದರೀಗ ಅವರ ಜೊತೆಯಲ್ಲೇ ಇದ್ದಾರೆ. ರಾಜಕೀಯದಲ್ಲಿ ಇದೆಲ್ಲ ಸರ್ವೇ ಸಾಮಾನ್ಯ, ಅದು ಅನಿವಾರ್ಯ ಕೂಡ, ಅವರ ಸಹವಾಸ ಬಿಟ್ಟೆ ಎನ್ನುವ ಕಾರಣಕ್ಕೆ ಜೆಡಿಎಸ್‌ನವರು ನನ್ನ ಮೇಲೆ ಸಿಟ್ಟು ಮಾಡಿಕೊಳ್ಳುವುದು, ಹಗೆತನ ಸಾಧಿಸುವುದು ಒಳ್ಳೆಯದರಲ್ಲ ಎಂದರು.



ನಾನು ದೇವೇಗೌಡರ ಕುಟುಂಬಕ್ಕೆ ಚೂರಿ ಹಾಕಿ ಹೋಗಿಲ್ಲ, ಅರಸೀಕೆರೆಗೆ ಎಂಎಲ್‌ಸಿ ಸ್ಥಾನ ಕೊಡಲಿಲ್ಲ, ಆ ಕಾರಣಕ್ಕೆ ಹೊರ ಹೋಗುತ್ತಿದ್ದೇನೆ ಎಂದು ಬಹಿರಂಗ ಸಭೆಯಲ್ಲೇ ಹೇಳಿದ್ದೆ. ನಾನು ಜೆಡಿಎಸ್‌ನಲ್ಲಿದ್ದಾಗ ಅವರ ಗೆಲುವಿಗೆ ನಾನೂ ಮತ ಹಾಕಿಸಿದ್ದೇನೆ. ನಾನು ಇವರಿಗೆ ಚಾಕು ಹಾಕಿದ್ದರೆ ಜನ ನನ್ನ ಸೋಲಿಸುತ್ತಿದ್ದರು. 20 ಸಾವಿರ ಮತಗಳಿಂದ ಏಕೆ ಗೆಲ್ಲಿಸಿದ್ರು ಎಂದು ಮರು ಪ್ರಶ್ನೆ ಹಾಕಿದರು. ಕಳೆದ ಎರಡೂವರೆ ವರ್ಷಗಳಿಂದಲೂ ವಿಧಾನಸಭೆಯಲ್ಲಿ ನನಗೆ ಹಿಂಸೆ ನೀಡಲಾಗುತ್ತಿದೆ ಎಂದು ದೂರಿದರು.

ಮೊನ್ನೆ ದೃಶ್ಯ ಮಾಧ್ಯಮಗಳು ಸದನದಲ್ಲಿ ಇದ್ದಿದ್ದರೆ ಅವರ ಪ್ರಚೋದನೆ, ನಿಂದನೆ, ಅಸಂಬದ್ಧ ಪದ ಬಳಕೆ, ಟೀಕೆ ಟಿಪ್ಪಣಿ ಗೊತ್ತಾಗುತ್ತಿತ್ತು. ಆದರೆ ನನ್ನ ಹೇಳಿಕೆ ಮಾತ್ರ ರೆಕಾರ್ಡ್ ಆಗಿದೆ ಎಂದು ವಿಷಾದಿಸಿದರು. ಹಾಗಾಗಿ ಸದನದ ಒಳಗೆ ಅಂದು ನಡೆಯಿತು, ಅವರ ಪ್ರಚೋದನೆ ಏನು ಎಂಬುದನ್ನು ವಿಶ್ಲೇಷಣೆ ಮಾಡಿ ನನಗೆ ನ್ಯಾಯ ಕೊಡಿಸಬೇಕು, ಮಾಧ್ಯಮಗಳಿಂದ ಅದು ಸಾಧ್ಯವಿದೆ ಎಂದು ಮನವಿ ಮಾಡಿದರು.

ಮಾತೆತ್ತಿದರೆ ನನ್ನನ್ನು ರಾಗಿ ಕಳ್ಳ, ಕೊಬ್ಬರಿ ಕಳ್ಳ, ದೇವೇಗೌಡರಿಗೆ ಚೂರಿ ಹಾಕಿದ್ದೇನೆ ಎಂದು ಪದೇ ಪದೆ ಕಿಚಾಯಿಸುತ್ತಿದ್ದರು.

ಕಳ್ಳ, ದರೋಡೆ ಕೋರ ಅನ್ನೋದು ಅಸಂವಿಧಾನಿಕ ಪದ ಅಲ್ವಾ, ಮನರೇಗಾ ಯೋಜನೆ ಅಗತ್ಯತೆ ಬಗ್ಗೆ ನಾನು ಮಾತನಾಡಲು ಬಿಡದೆ ತಕ ತಕ ಅಂತ ಕುಣಿಯಲು ಆರಂಭಿಸಿದರು.ತಾಳ್ಮೆ ಕಳೆದು ಕೊಂಡು ನಾನು ಮಾತನಾಡಬೇಕಾಯಿತು. 20 ವರ್ಷದಲ್ಲಿ ಸದನದಲ್ಲಿ ಹೀಗೆ ಆಗಿದ್ದು ಇದೇ ಮೊದಲು, ನಾನು ಕಳ್ಳ ಅನ್ನೋದನ್ನು ಇವರು ಸಾಬೀತು ಮಾಡ್ತಾರ ಎಂದು ಖಾರವಾಗಿ ಪ್ರಶ್ನಿಸಿದರು.

ವಿಪಕ್ಷದವರು ನನ್ನ ಪ್ರಚೋದನೆ ಮಾಡಲಿಲ್ಲ ಅಂದರೆ ನಾನು ಭಾಷಣ ಮುಗಿಸಿ ಸುಮ್ಮನಾಗುತ್ತಿದ್ದೆ. ಆದರೆ ನನಗೆ ಸಂಬಂಧ ಪಡದ ಕಾರಣ ಮುಂದಿಟ್ಟು ಒಬ್ಬ ಶಾಸಕನನ್ನು ಈ ರೀತಿ ನಿಂದನೆ ಇದೇ ಮೊದಲು, ಮಹಿಳೆ ಬಗ್ಗೆ ಮಾತನಾಡಿದ್ದಕ್ಕೆ ಈಗಾಗಲೇ ವಿಷಾದ ವ್ಯಕ್ತಪಡಿಸಿದ್ದೇನೆ. ಆರ್‌ಎಸ್‌ಎಸ್ ಬಗ್ಗೆ ನನಗೆ ಗೌರವ ಇದೆ ಎಂದು ಇದೇ ವೇಳೆ ಹೇಳಿದ ಗೌಡರು, ಹಳ್ಳಿ ಭಾಷೆಯಲ್ಲಿ ಕೆಲವೊಂದು ಮಾತನಾಡಿದ್ದೇನೆ, ಆಡಬಾರದಿತ್ತು ಎಂದರು. ಮುಂದಿನ ದಿನಗಳಲ್ಲಿ ದೃಶ್ಯ ಮಾಧ್ಯಮದವರನ್ನೂ ಒಳಗೆ ಬಿಡುವಂತೆ ನಾನೇ ನಿರ್ಣಯ ಮಂಡಿಸುವೆ ಎಂದರು.

ಸುದ್ದಿಗೋಷ್ಠಿಯಲ್ಲಿ ಅರಸೀಕೆರೆ ನಗರಸಭೆ ಮಾಜಿ ಅಧ್ಯಕ್ಷ ಸಮೀವುಲ್ಲಾ, ಮುಖಂಡರಾದ ಶಿವಶಂಕರಸ್ವಾಮಿ, ರಮಾನಾಥ್ ಇದ್ದರು.

### ಮಾತನಾಡುವಾಗ ಆತ್ಮಸಾಕ್ಷಿ ಇರಲಿ

ಅರಸೀಕೆರೆಯಲ್ಲಿ ಸರ್ಕಾರಿ ಪಾರ್ಕ್ ಕಬಳಿಸಿದ್ದೇನೆ ಎಂಬುದು ಶುದ್ಧ ಸುಳ್ಳು. ನಾನು ಮನೆ ಕಟ್ಟಿದ್ದು 1991ರಲ್ಲಿ, ಶಾಸಕ ಆಗಿದ್ದು 2008ರಲ್ಲಿ ಎಂದ ಅವರು, ಪೆನ್ ಡ್ರೈವ್ ವಿಚಾರ ನನಗೆ ಗೊತ್ತಿಲ್ಲ. ಸುಳ್ಳು ಹೇಳುವುದಕ್ಕೂ ಆತ್ಮಸಾಕ್ಷಿ ಬೇಡವೇ ಎಂದು ಬಿಜೆಪಿ ಮುಖಂಡ ದೇವರಾಜೇಗೌಡ ವಿರುದ್ಧ ಹರಿಹಾಯ್ದರು.

ಕೈ ಮುಖಂಡ ಮಹೇಶ್ ಮಾತನಾಡಿ, ದೇವರಾಜೇಗೌಡ ಆರೋಪ ಸತ್ಯಕ್ಕೆ ದೂರ, ಅವನ ಮಾತಿನಲ್ಲಿ ಅರ್ಥ ಇಲ್ಲ, ಅವನು ಮೂರನೇ ದರ್ಜೆ ಮಾತನಾಡಿದ್ದೇವೆ ಎಂದು ಟೀಕಿಸಿದರು.

# ವ್ಯವಹಾರ ಜ್ಞಾನ ವೃದ್ಧಿಗೆ ಮಕ್ಕಳ ಸಂತೆ ಸಹಕಾರಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಶ್ರವಣಬೆಳಗೊಳ: ಮಕ್ಕಳ ಸಂತೆ ಎಂಬುದು ವಿದ್ಯಾರ್ಥಿಗಳಿಗೆ ಕೇವಲ ಶೈಕ್ಷಣಿಕ ಜ್ಞಾನವನ್ನಷ್ಟೇ ಅಲ್ಲದೆ ವ್ಯವಹಾರಿಕ ಜ್ಞಾನವನ್ನು ತಿಳಿಸುವಂತಹ ಮಹತ್ವದ ಕಾರ್ಯವಾಗಿದೆ ಎಂದು ಸ್ವಸ್ತಿಶ್ರೀ ಚಾರುಕೀರ್ತಿ ಭಟ್ಟಾರಕ ಪಟ್ಟಾಚಾರ್ಯ ಸ್ವಾಮೀಜಿ ಹೇಳಿದರು.

ಪಟ್ಟಣದ ಅಂಬಿಕಾ ಶಾಲೆಯಲ್ಲಿ ಶನಿವಾರ ಆಯೋಜಿಸಿದ್ದ ಮಕ್ಕಳ ಸಂತೆ ಹಾಗೂ ಆಹಾರ ಮೇಳ ಉದ್ಘಾಟಿಸಿ ಮಾತನಾಡಿ, ಮಕ್ಕಳಲ್ಲಿ ಆರ್ಥಿಕ ಜ್ಞಾನ ಮತ್ತು ಗ್ರಾಮೀಣ ಭಾಗದ ಜನರ ಜೀವನ ಹೇಗಿರುತ್ತದೆ ಎಂಬುದನ್ನು ಮಕ್ಕಳ ಸಂತೆ ಮತ್ತು ಆಹಾರ ಮೇಳದಲ್ಲಿ ಅವರು ಪ್ರತ್ಯಕ್ಷವಾಗಿ ನೋಡುವ ಮೂಲಕ ತಿಳಿಯುವಂತಹ ಉತ್ತಮ ವೇದಿಕೆ ಇದಾಗಿದೆ ಎಂದರು.

ಸಾವಯವ ಕೃಷಿಕ ರಾಘವೇಂದ್ರ, ಬೆಕ್ಕ ಮಾತನಾಡಿ, ಮಕ್ಕಳ ಸಂತೆ ಶಾಲೆಗಳಲ್ಲಿ ಆಯೋಜಿಸಲಾಗುವ ಒಂದು ವಿಶಿಷ್ಟ ಕಾರ್ಯಕ್ರಮ. ಮಕ್ಕಳು ಸ್ವತಃ ವ್ಯಾಪಾರಿಗಳಾಗಿ ಹಣ್ಣು-ಹಂಪಲು, ತಿನಿಸು, ಗೃಹೋಪಯೋಗಿ ವಸ್ತುಗಳನ್ನು ಮಾರಾಟ ಮಾಡುವ ಮೂಲಕ ವ್ಯವಹಾರ ಜ್ಞಾನ, ಲೆಕ್ಕಾಚಾರ ಹಾಗೂ ಗ್ರಾಹಕರೊಂದಿಗೆ ವ್ಯವಹರಿಸುವ ಕೌಶಲ್ಯವನ್ನು ಈ ಕಾರ್ಯಕ್ರಮದಲ್ಲಿ ಕಲಿಯುತ್ತಾರೆ. ಸ್ವಾವಲಂಬನೆಯ ಪಾಠಗಳನ್ನು ಕಲಿಯುವುದರ ಜೊತೆಗೆ ಮಕ್ಕಳಲ್ಲಿ ಸೃಜನಶೀಲತೆ ಆರ್ಥಿಕ ಜ್ಞಾನ ವೃದ್ಧಿಯಾಗುತ್ತದೆ ಎಂದರು.

ಬಾಹುಬಲಿ ಶಿಕ್ಷಣ ಸಂಸ್ಥೆಗಳ ಕಾರ್ಯದರ್ಶಿ ಬಬನ್ ಪಿ. ದತವಾಡೆ ಮಾತನಾಡಿದರು. ಮುಖ್ಯ ಶಿಕ್ಷಕಿ ಸರೋಜಾ, ರೈತ ಸಂಘದ ಅಧ್ಯಕ್ಷ ಮಂಜೇಗೌಡ ಮುಂತಾದವರಿದ್ದರು.

# ಅರ್ಜಿ ವಿಲೇವಾರಿಗೆ ವಿಳಂಬ ಬೇಡ: ಡಿಸಿ ಸೂಚನೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಸಾರ್ವಜನಿಕರ ಕೆಲಸದಲ್ಲಿ ವಿಳಂಬ ಮಾಡದೆ ತ್ವರಿತಗಿಯಲ್ಲಿ ಅರ್ಜಿ ವಿಲೇವಾರಿ ಮಾಡಬೇಕು ಎಂದು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಹೇಳಿದರು.

ಪಟ್ಟಣದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಶನಿವಾರ ಹಮ್ಮಿಕೊಂಡಿದ್ದ ತಾಲ್ಲೂಕು ಮಟ್ಟದ ಜನಸ್ಪಂದನಾ ಸಭೆಯಲ್ಲಿ ಮಾತನಾಡಿ, ಸಾರ್ವಜನಿಕರ ಸಮಸ್ಯೆಗಳನ್ನು ಯಾವುದೇ ವಿಳಂಬ ವಿಲ್ಲದೆ ಬಗೆಹರಿಸಬೇಕು ಮತ್ತು ಪ್ರತಿ ತಿಂಗಳ ಮೂರನೇ ಶನಿವಾರ ತಾಲ್ಲೂಕು ಮಟ್ಟದಲ್ಲಿ ನಡೆಯುವ ಜನಸ್ಪಂದನಾ ಸಭೆಯ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಇದೇ ವೇಳೆ ವಿವಿಧ ಸಮಸ್ಯೆ ಒಳಗೊಂಡ 150 ಕ್ಕೂ ಅಧಿಕ ಅರ್ಜಿ ಬಂದಿದ್ದು, ಹೆಚ್ಚು ಕಂದಾಯ ಇಲಾಖೆಗೆ ಸೇರಿವೆ. ಹೊಲಕ್ಕೆ ತೆರಳುವ ದಾರಿ ಸಮಸ್ಯೆ, ಸರ್ಕಾರಿ ಆಸ್ತಿ, ಕೆರೆಕಟ್ಟೆಗಳ ಒತ್ತುವರಿ, ರುದ್ರಭೂಮಿ ಸಮಸ್ಯೆ, ಮಾಸಾಶನ, ಸರ್ವೆ ಸಮಸ್ಯೆ, ಮಕ್ಕಳಿಂದ ಅನ್ಯಾಯ ಹೀಗೆ ನಾನಾ ಸಮಸ್ಯೆ ಹೊತ್ತ ಸಾರ್ವಜನಿಕರು ಡಿಸಿ ಅವರನ್ನು ಖುದ್ದು ಭೇಟಿಯಾಗಿ ಪರಿಹಾರಕ್ಕೆ ಮನವಿ ಮಾಡಿದರು.

ಬಳಿಕ ಪುರಸಭಾ ವ್ಯಾಪ್ತಿಯ ಕೆಲ ವಾರ್ಡಿನಲ್ಲಿ ಕೊಳಚೆ ಪ್ರದೇಶ ದಿಂದ ಜನರ ಆರೋಗ್ಯದ ಮೇಲೆ ಕೆಟ್ಟ ಪರಿಣಾಮ ಉಂಟಾಗುತ್ತಿದೆ ಶೀಘ್ರವೇ ಸರಿಪಡಿಸುವಂತೆ ಪುರಸಭಾ ಮುಖ್ಯಾಧಿಕಾರಿಗಳಿಗೆ ತಾಕೀತು ಮಾಡಿದರು. ನಾನು ಡಿಸಿಯಾಗಿ ಅಧಿಕಾರ ಸ್ವೀಕರಿಸಿದ ನಂತರ ನೂರಾರು ಜನರು ವಿವಿಧೆಡೆಗಳಿಂದ ತಮ್ಮ ಸಮಸ್ಯೆಗಳೊಂದಿಗೆ ಹಾಸನಕ್ಕೆ ಬರುತ್ತಿದ್ದುದನ್ನು ಗಮನಿಸಿ ಪ್ರತಿ ತಿಂಗಳ ಮೂರನೇ ಶನಿವಾರ ಅಯಾ ತಾಲ್ಲೂಕು ಮಟ್ಟದಲ್ಲಿಯೇ ಜನಸ್ಪಂದನಾ ಸಭೆ ನಡೆಸುತ್ತಿದ್ದೇನೆ. ಬಳಿಕ ಹಾಸನಕ್ಕೆ ಬರುವವರ ಸಂಖ್ಯೆ ತೀರ ಇಳಿಮುಖವಾಗಿದೆ ಎಂದರು.

ತಾಲ್ಲೂಕು ಮಟ್ಟದ ಜನಸ್ಪಂದನಾ ಸಭೆಯಲ್ಲಿ ನಾನೂ ಭಾಗವಹಿಸುವೆ ಎಂದ ಅವರು, ಹೆಚ್ಚಾಗಿ ಕಂದಾಯ ಇಲಾಖೆಗೆ ಸಂಬಂಧಿಸಿದ ಅರ್ಜಿಗಳು ಬಂದಿದ್ದು, ತ್ವರಿತವಾಗಿ ವಿಲೇವಾರಿ ನಡೆಸಬೇಕು ಎಂದು ಈಗಾಗಲೇ ಅಧಿಕಾರಿಗಳಿಗೆ ತಿಳಿಸಲಾಗಿದೆ.

ಅಧಿಕಾರಿಗಳ ವಿಳಂಬ ಮತ್ತು ನಿರ್ಲಕ್ಷ್ಯದಿಂದ ಸಾರ್ವಜನಿಕರು ಅಲೆಯುವಂತೆ ಮಾಡಿದರೆ ಅಂತಹವರ ವಿರುದ್ಧ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಎಚ್ಚರಿಕೆ ನೀಡಿದರು. ಕೆಲ ಭಾಗದಲ್ಲಿ ಕೆರೆ ಕಟ್ಟೆಗಳು ಮತ್ತು ಸರ್ಕಾರಿ ಆಸ್ತಿ ಒತ್ತುವರಿ ಆಗಿರುವ ಬಗ್ಗೆ ಅರ್ಜಿ ಬಂದಿವೆ. ಸ್ಥಳೀಯರು ಸಹಕಾರ ನೀಡಿದರೆ ಖಂಡಿತ ಒತ್ತುವರಿ ತೆರವುಗೊಳಿಸುವ ವಿಶ್ವಾಸ ವ್ಯಕ್ತ ಪಡಿಸಿದರು.

ಪ್ರಭಾರ ಉಪ ವಿಭಾಗಧಿಕಾರಿ ಮಂಜುನಾಥ್, ಭೂ ಪರಿವರ್ತನಾ ಜಿಲ್ಲಾ ಸಹಾಯಕ ಅಧಿಕಾರಿ ಹೇಮಲತಾ, ಅರಸೀಕೆರೆ ಡಿವೈಎಸ್‌ಪಿ ಗೋಪಿ, ತಹಸೀಲ್ದಾರ್ ಶ್ರೀಧರ್ ಕಂಕಣವಾಡಿ, ಸಿಪಿಐ ರೇವಣ್ಣ, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ರಾಷ್ಟ್ರೀಯ ಚಿಂತನೆ ಮೈಗೂಡಿಸಿಕೊಳ್ಳಿ: ಶಾಸಕ ಸಿಮೆಂಟ್ ಮಂಜು

## ಹಾನುಬಾಳು ವಿದ್ಯಾನಿಧಿ ಶಾಲಾ ವಾರ್ಷಿಕೋತ್ಸವ | ಸಾಂಸ್ಕೃತಿಕ ಕಾರ್ಯಕ್ರಮ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ದೇಶದ ಭವಿಷ್ಯವನ್ನು ರೂಪಿಸುವ ಯುವಕ-ಯುವತಿಯರು ರಾಷ್ಟ್ರೀಯ ಚಿಂತನೆಗಳನ್ನು ಮೈಗೂಡಿಸಿಕೊಂಡು ಬದುಕಿನಲ್ಲಿ ಮುನ್ನಡೆಯಬೇಕು ಎಂದು ಶಾಸಕ ಸಿಮೆಂಟ್ ಮಂಜು ಸಲಹೆ ನೀಡಿದರು.

ತಾಲೂಕಿನ ಹಾನುಬಾಳು ವಿನಾಯಕ ಎಜುಕೇಶನ್ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ವಿದ್ಯಾನಿಧಿ ಶಾಲೆಯ ವಾರ್ಷಿಕೋತ್ಸವ ವಿದ್ಯಾ ನಿಧಿಯೋತ್ಸವದಲ್ಲಿ ಮಾತನಾಡಿದ ಅವರು, ಶಿಕ್ಷಣ ಬದುಕಿನ ಮೂಲಮಂತ್ರವಾಗಬೇಕು. ಯಾವ ಕಾರಣಕ್ಕೂ ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದು. ಉನ್ನತ ಶಿಕ್ಷಣ ಪಡೆದು ಸಮಾಜದಲ್ಲಿ ಉನ್ನತ ಸ್ಥಾನವನ್ನು ಪಡೆಯುವತ್ತ ವಿದ್ಯಾರ್ಥಿಗಳು ದೃಢಸಂಕಲ್ಪ ಹೊಂದಬೇಕು ಎಂದರು.



ಯುವಕರು ದುಶ್ಚಟಗಳಿಗೆ ದಾಸರಾಗದೆ, ಬದುಕನ್ನು ರೂಪಿಸುವ ಶಿಕ್ಷಣದ ಕಡೆಗೆ ಗಮನ ಹರಿಸಬೇಕು. ಸಹನೆ, ಸೌಹಾರ್ದತೆ, ಸಹಬಾಳ್ವೆ ಹಾಗೂ ಸಾಮಾಜಿಕ ಕಳಕಳಿಯನ್ನು ರೂಢಿಸಿಕೊಳ್ಳುವುದು ಅಗತ್ಯ ಎಂದು ಕಿವಿಮಾತು ಹೇಳಿದರು.

ಶಿಕ್ಷಣ ಸಂಸ್ಥೆಗಳು ಕೇವಲ ಪಠ್ಯಕ್ರಮಗಳ ಬೋಧನೆಗೆ ಸೀಮಿತವಾಗದೆ, ಇಂದಿನ ಸ್ಪರ್ಧಾತ್ಮಕ ಜಗತ್ತಿಗೆ ಪೂರಕವಾದ ಜ್ಞಾನವನ್ನು ವಿದ್ಯಾರ್ಥಿಗಳಲ್ಲಿ ತುಂಬುವ ಮೂಲಕ ಅವರ ಆಲೋಚನಾ ಸಾಮರ್ಥ್ಯವನ್ನು ವೃದ್ಧಿಸಬೇಕಿದೆ ಎಂದು ಅವರು ತಿಳಿಸಿದರು.

ವಾರ್ಷಿಕೋತ್ಸವ ಕಾರ್ಯಕ್ರಮಕ್ಕೆ ನಟಿ ಅಭಿನಯ ಭಾಗವಹಿಸಿ ಮೆರಗು ನೀಡಿದರು.

ಇದೇ ಸಂದರ್ಭದಲ್ಲಿ ಹಾನುಬಾಳಿನಲ್ಲಿ ಕಳೆದ 28 ವರ್ಷಗಳಿಂದ ಅಂಚೆ ಇಲಾಖೆಯಲ್ಲಿ ಸೇವೆ ಸಲ್ಲಿಸಿದ ವಾಸು ಅವರನ್ನು ಶಾಲಾ ಆಡಳಿತ ಮಂಡಳಿಯಿಂದ ವಿಶೇಷವಾಗಿ ಗೌರವಿಸಲಾಯಿತು. ಸಭಾ ಕಾರ್ಯಕ್ರಮದ ನಂತರ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಿತು.

ರಾಷ್ಟ್ರೀಯ ಸೇವಾ ಸಮಿತಿ ರಾಷ್ಟ್ರೀಯ ಅಧ್ಯಕ್ಷ ರಾಮಚಂದ್ರಪ್ಪ, ಸಾಮಾಜಿಕ ಹೋರಾಟಗಾರ ಯಡೇಹಳ್ಳಿ ಆರ್.ಮಂಜುನಾಥ್, ಎಸ್‌ಡಿಎಂಸಿ ಸದಸ್ಯ ಗಣೇಶ್, ಉಪಾಧ್ಯಕ್ಷೆ ಅನ್ವಿತಾ, ವಿನಾಯಕ ಎಜುಕೇಶನ್ ಟ್ರಸ್ಟ್ ಅಧ್ಯಕ್ಷ ಬಸವರಾಜು, ಕಾರ್ಯದರ್ಶಿ ಲಿಂಗದೇವರು, ಖಜಾಂಚಿ ಹರೀಶ್ ಇತರರಿದ್ದರು.

### ದುರಾಸೆಯೇ ಭ್ರಷ್ಟಾಚಾರದ ಮೂಲ

ನಿವೃತ್ತ ಲೋಕಾಯುಕ್ತ ನ್ಯಾಯಮೂರ್ತಿ ಸಂತೋಷ್ ಹೆಗಡೆ ಮಾತನಾಡಿ, ಭ್ರಷ್ಟಾಚಾರ ಮುಕ್ತ ಭಾರತ ನಿರ್ಮಾಣದಲ್ಲಿ ಯುವಕರ ಪಾತ್ರ ನಿರ್ಣಾಯಕವಾಗಿದೆ. ಶಿಕ್ಷಣ, ತಂತ್ರಜ್ಞಾನ ಜ್ಞಾನ, ನೈತಿಕತೆ ಮತ್ತು ಸಾಮಾಜಿಕ ಜವಾಬ್ದಾರಿಯ ಮೂಲಕ ಯುವಕರು ಬದಲಾವಣೆಯ ಹರಿಕಾರರಾಗಬಹುದು ಎಂದರು. ಯುವಜನಾಂಗ ದೇಶದ ಅತಿ ದೊಡ್ಡ ಶಕ್ತಿಯಾಗಿದ್ದು, ದೃಢಸಂಕಲ್ಪ ಹಾಗೂ ಪ್ರಾಮಾಣಿಕತೆಯಿಂದ ಭ್ರಷ್ಟಾಚಾರ ಮುಕ್ತ ಭಾರತದ ಕನಸನ್ನು ನನಸಾಗಿಸಬಹುದು ಎಂದು ಹೇಳಿದರು.

ಭ್ರಷ್ಟಾಚಾರವನ್ನು ಕೇವಲ ಕಾನೂನಿನ ಮೂಲಕ ಸಂಪೂರ್ಣ ನಿರ್ಮೂಲನೆ ಮಾಡಲಾಗುವುದಿಲ್ಲ. ಆದರೆ ನಾಗರಿಕರ ಜಾಗೃತಿ ಮತ್ತು ಭ್ರಷ್ಟರನ್ನು ಸಮಾಜದಿಂದ ಬಹಿಷ್ಕರಿಸುವ ಮನೋಭಾವದ ಮೂಲಕ ಅದನ್ನು ನಿಯಂತ್ರಿಸಬಹುದು. ದುರಾಸೆಯೇ ಭ್ರಷ್ಟಾಚಾರದ ಮೂಲವೆಂದು ಅವರು ಅಭಿಪ್ರಾಯಪಟ್ಟರು.

# ಮೈತ್ರಿ ಬಗ್ಗೆ ಕಾರ್ಯಕರ್ತರ ಅಭಿಪ್ರಾಯ ವರಿಷ್ಠರಿಗೆ ಹೇಳುವೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯಲ್ಲಿ ಬಿಜೆಪಿ ಸದೃಢವಾಗಿದ್ದು ಮುಂಬರುವ ವಿಧಾನಸಭೆ ಹಾಗೂ ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಮೈತ್ರಿ ಬೇಡವೆಂಬುದು ಕಾರ್ಯಕರ್ತರ ಅಭಿಪ್ರಾಯವಾಗಿದೆ. ಈ ವಿಚಾರವನ್ನು ನಾಯಕರ ಗಮನಕ್ಕೆ ತರಲಾಗುವುದು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಂ ಜೆ. ಗೌಡ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಶನಿವಾರ ಮಾತನಾಡಿ, ಜೆಡಿಎಸ್ ಜೊತೆಗಿನ ಮೈತ್ರಿ ಕುರಿತು ಪಕ್ಷದ ಜಿಲ್ಲಾ ನಾಯಕರಲ್ಲಿ ಸ್ಪಷ್ಟತೆ ಇದೆಯಾದರೂ ಮೈತ್ರಿಯಲ್ಲಿ ಒಡಕುಂಟಾಗದಂತೆ ರಾಷ್ಟ್ರೀಯ ನಾಯಕರು ಕ್ರಮ ಕೈಗೊಳ್ಳುತ್ತಾರೆ ಎಂದರು.

ಮುಂಬರುವ ಚುನಾವಣೆ ಕುರಿತು ಪಕ್ಷ ಸಂಘಟನೆ ದೃಷ್ಟಿಯಿಂದ ಜಿಲ್ಲೆಯ ಏಳು ವಿಧಾನಸಭಾ ಕ್ಷೇತ್ರಗಳ ಮುಖಂಡರ ಸಭೆ ನಡೆಸಿ ಕಾರ್ಯಕರ್ತರ ಅಭಿಪ್ರಾಯ ಸಂಗ್ರಹಿಸಲಾಗಿದೆ. ಜಿಲ್ಲೆಯಲ್ಲಿ ಬಿಜೆಪಿ ಪ್ರಬಲ ಪಕ್ಷವಾಗಿದೆ. ಮುಂದಿನ ದಿನಗಳಲ್ಲಿ ಎಲ್ಲಾ ಜಿಲ್ಲಾ ಪಂಚಾಯಿತಿ ಕ್ಷೇತ್ರಗಳಲ್ಲಿ ಸಭೆ ನಡೆಸಿ ಪಕ್ಷ ಸಂಘಟನೆಗೆ ಒತ್ತು ನೀಡಲಾಗುವುದು ಎಂದರು. ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಜೆಡಿಎಸ್ ಜೊತೆಗೆ ಮೈತ್ರಿ ವಿಚಾರಕ್ಕೆ ಪ್ರತಿಕ್ರಿಯಿಸಿದ ಪ್ರೀತಂಗೌಡ, ಜಿಲ್ಲೆಯ ಬಿಜೆಪಿ ನಾಯಕರಲ್ಲಿ ಸ್ಪಷ್ಟತೆ ಇದ್ದರೂ, ರಾಷ್ಟ್ರೀಯ ನಾಯಕರ ತೀರ್ಮಾನದಂತೆ ಮೈತ್ರಿಯಲ್ಲಿ ಒಡಕು ಬಾರದಂತೆ ನಡೆದುಕೊಳ್ಳಬೇಕಾಗಿದೆ ಎಂದು ಹೇಳಿದರು. ಜಿಲ್ಲೆಯಲ್ಲಿ ಬಿಜೆಪಿ ಸ್ವಂತ ಶಕ್ತಿಯ ಮೇಲೆ ಚುನಾವಣೆ ಎದುರಿಸಬೇಕು ಎಂಬುದು ಬಹುತೇಕ ಕಾರ್ಯಕರ್ತರ ಅಭಿಪ್ರಾಯ. ಮೈತ್ರಿಯಿಂದ ಪಕ್ಷದ ಕಾರ್ಯಕರ್ತರು ಅವಕಾಶಗಳಿಂದ ವಂಚಿತರಾಗುವ ಆತಂಕವಿದ್ದು, ಇದು ವಿರೋಧ ಪಕ್ಷಗಳಿಗೆ ಲಾಭವಾಗುವ ಸಾಧ್ಯತೆ ಇದೆ ಎಂದರು.



# ಮುಕ್ತಿ ಪ್ರಾಪ್ತಿಗೆ ಸತ್ಕಾರ್ಯ ಮಾಡಿ: ಶ್ರೀ ರೇಣುಕಾ ಸ್ವಾಮೀಜಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**


ಚನ್ನರಾಯಪಟ್ಟಣ: ಮನಸ್ಸು ಪವಿತ್ರತೆ ಹಾಗೂ ಭಕ್ತಿಯಿಂದ ಕೂಡಿದ್ದರೆ ಬದುಕಿನಲ್ಲಿ ಉತ್ತಮ ಫಲಗಳ ಜೊತೆಗೆ ಮುಕ್ತಿ ಪ್ರಾಪ್ತಿಯಾಗಲಿದೆ ಎಂದು ವೈದ್ಯನಾಥಪುರ ಶ್ರೀ ರೇಣುಕಾ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ತಾಲೂಕಿನ ಗುಳ್ಳಹಳ್ಳಿ ಗ್ರಾಮದಲ್ಲಿ ಜೀರ್ಣೋದ್ಧಾರಗೊಂಡಿರುವ ಶ್ರೀ ಕಲ್ಲೇಶ್ವರ ದೇವಾಲಯದ ಲೋಕಾರ್ಪಣಾ ಕಾರ್ಯಕ್ರಮದಲ್ಲಿ ಮಾತನಾಡಿ, ಬದುಕಿನಲ್ಲಿ ಮುಕ್ತಿ ಕಾಣದ ಜೀವನ ಶೂನ್ಯ ಎಂದು ಆಶೀರ್ವಚನ ನೀಡಿದರು.

ಭಗವಂತನನ್ನು ತಿಳಿದುಕೊಳ್ಳಲು ಅಥವಾ ಪರಿಚಯಿಸಿಕೊಳ್ಳಲು ಗುರು ಬೇಕು. ಹಣವಂತರು ದಾನ ಮಾಡಿದರೆ ಬಡವರು ಧ್ಯಾನ ಮಾಡಬೇಕು. ಇಲ್ಲಿ ಭಗವಂತನಿಲ್ಲದೆ ಯಾರ ಬದುಕು ನಡೆಯಲು ಸಾಧ್ಯವಿಲ್ಲ ಎಂದು ತಿಳಿಸಿದರು.

ನುಗ್ಗೇಹಳ್ಳಿ ಪುರವರ್ಗ ಹಿರೇಮಠದ ಶ್ರೀ ಮಹೇಶ್ವರ ಶಿವಾಚಾರ್ಯ ಮಾತನಾಡಿ, ಭಾರತೀಯ ಸಂಸ್ಕೃತಿಯು ಹಿಂದು ಧರ್ಮದ ತಳಹದಿಯ ಮೇಲೆ ನಿಂತಿದ್ದು ದೈನಂದಿನ ಬದುಕು, ಸಂಸ್ಕಾರ ಹಾಗೂ ಸಂಸ್ಕೃತಿಯೇ ಸನಾತನ ಧರ್ಮವಾಗಿ ಸ್ಥಾಪನೆಗೊಂಡಿದೆ. ಹಿಂದು ಧರ್ಮಕ್ಕೆ ಶತಮಾನಗಳ ಇತಿಹಾಸವಿದೆ ಎಂದರು.

ಶಾಸಕ ಸಿ.ಎನ್.ಬಾಲಕೃಷ್ಣ ಮಾತನಾಡಿ, ದೇಗುಲದ ನಿರ್ಮಾಣಕ್ಕೆ ಹೇಮಾವತಿ ಸಕ್ಕರೆ ಕಾರ್ಖಾನೆ ಸೇರಿದಂತೆ ವಿವಿಧ ಮೂಲಗಳಿಂದ 50 ಲಕ್ಷ ರೂ. ಅನುದಾನ ಕಲ್ಪಿಸಲಾಗಿದೆ. ಮತ್ತಷ್ಟು ಅನುದಾನ ಕಲ್ಪಿಸಿ ದೇವರ ಕಾರ್ಯ ಸೇರಿದಂತೆ ಮದುವೆ ಹಾಗೂ ಇತರೆ ಸಮಾರಂಭಗಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಸಮುದಾಯ ಭವನ ನಿರ್ಮಿಸಲಾಗುವುದು ಎಂದರು.



### ಜನರ ಸಮಸ್ಯೆಗೆ ಸ್ಪಂದಿಸಲು ಒತ್ತು

ನಾನು ಚುನಾವಣೆ ವೇಳೆ ಬರುವ ವ್ಯಕ್ತಿಯಲ್ಲ, ಜನಗಳ ಮಧ್ಯ ನಿಂತು ಅವರ ಕಷ್ಟಗಳಿಗೆ ಸ್ಪಂದಿಸುತ್ತೇನೆ. ರಾಜಕೀಯವೇ ಬೇರೆ ಜನಗಳ ಸಂಕಷ್ಟಗಳಿಗೆ ನೆರವಾಗುವ ವಿಚಾರವೇ ಬೇರೆ. ತಾಲ್ಲೂಕಿನ ನೀರಾವರಿ ಯೋಜನೆಗೆ ಹಗಲಿರುಳು ಶ್ರಮಿಸಿರುವ ಫಲವಾಗಿ 200ಕ್ಕೂ ಹೆಚ್ಚು ಕೆರೆ ಕಟ್ಟೆಗಳಿಗೆ ಕಳೆದ 2-3 ವರ್ಷಗಳಿಂದ ನೀರು ತುಂಬಿಸಲಾಗುತ್ತಿದೆ. ಇದರಿಂದ ವ್ಯಾಪ್ತಿಯ ಅಂತರ್ಜಲ ಚೇತರಿಕೆ ಕಂಡಿದೆ. ಕೊಳವಿ ಬಾವಿಗಳಲ್ಲಿಯೂ ನೀರಿನ ಪ್ರಮಾಣ ಏರಿಕೆಯಾಗಿದ್ದು ರೈತರ ಬದುಕು ಹಸನಾಗಿದೆ ಎಂದು ತಿಳಿಸಿದರು.

ಕೆರೆಯ ಮೂಲ ಉಳಿಸುವುದು ಹಾಗೂ ಸಂರಕ್ಷಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಜಮೀನುಗಳಿಗೆ ಮಣ್ಣು ಸಾಗಿಸುವ ಬರದಲ್ಲಿ ಕೆರೆ ಅಂಗಳದ ಎಲ್ಲೆಂದರಲ್ಲಿ ಅವೈಜ್ಞಾನಿಕವಾಗಿ ಅತಿ ಹೆಚ್ಚು ಆಳವಾಗಿ ಮಣ್ಣು ತೆಗೆಯಲಾಗಿದೆ. ಇದರಿಂದ ಸಂಗ್ರಹವಾಗುವ ನೀರು ಹೆಚ್ಚು ದಿನಗಳು ಉಳಿಯುವುದಿಲ್ಲ. ದಯವಿಟ್ಟು ಕೆರೆ ಮೂಲ ಉಳಿಸುವಲ್ಲಿ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ತೆಂಡೆಕೆರೆ ಮಠದ ಶ್ರೀ ಗಂಗಾಧರ ಶಿವಾಚಾರ್ಯ ಸ್ವಾಮೀಜಿ, ಟಿಎಪಿಸಿಎಂಎಸ್ ಅಧ್ಯಕ್ಷ ಮೆಡಿಕಲ್ ವೆಂಕಟೇಶ್, ಎಪಿಎಂಸಿ ಮಾಜಿ ಅಧ್ಯಕ್ಷ ವಳಗೇರಹಳ್ಳಿ ಮಂಜೇಗೌಡ, ಪಿಎಲ್‌ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ನಂಜುಂಡೇಗೌಡ, ನುಗ್ಗೇಹಳ್ಳಿ ಸೊಸೈಟಿ ಮಾಜಿ ಅಧ್ಯಕ್ಷ ಸಂಪತ್ ಕುಮಾರ್, ದೇಗುಲದ ಶಿಲ್ಪಿ ರಮೇಶ್, ಅರ್ಚಕ ಶಂಭುಲಿಂಗ ಸ್ವಾಮೀಜಿ, ಪ್ರಮುಖರಾದ ರಾಜೇಶ್, ಧರ್ಮಣ್ಣ, ಶಂಕರ್, ಕೃಷ್ಣೇಗೌಡ, ರಘು, ಸತೀಶ್, ಹರೀಶ್, ಯುವರಾಜ್ ಇತರರಿದ್ದರು.

# ಅರ್ಹ ಫಲಾನುಭವಿಗಳಿಗೆ ಶೀಘ್ರ ನಿವೇಶನ ಹಂಚಿಕೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಬೇಲೂರು: ಪುರಸಭೆ ವ್ಯಾಪ್ತಿಯಲ್ಲಿ ವಾಸವಿರುವ ನಿವೇಶನ ರಹಿತ ಬಡ ಕುಟುಂಬಗಳಿಗೆ ಆಶ್ರಯ ಕಲ್ಪಿಸುವ ದೂರದೃಷ್ಟಿಯ ಹಿನ್ನೆಲೆಯಲ್ಲಿ ಪಟ್ಟಣ ಸಮೀಪದ ರಾಯಾಪುರ ಸರ್ವೆ ನಂ. 19ರ ಜಮೀನಿನಲ್ಲಿ ನಿವೇಶಗಳನ್ನಾಗಿ ಮಾರ್ಪಡಿಸಿದ್ದು ಶೀಘ್ರವೇ ಅರ್ಹರಿಗೆ ವಿತರಿಸಲಾಗುವುದು ಎಂದು ಶಾಸಕ ಎಚ್.ಕೆ.ಸುರೇಶ್ ಹೇಳಿದರು.

ಪಟ್ಟಣ ಸಮೀಪದ ರಾಯಾಪುರ ಗ್ರಾಮದಲ್ಲಿ ಪುರಸಭೆಗೆ ಸೇರಿದ ನಿವೇಶನಗಳ ಸಮೀಪ ಮೂಲ ಸೌಲಕರ್ಯ ಕಲ್ಪಿಸುವ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, ವಿಶ್ವವಿಖ್ಯಾತ ಪ್ರವಾಸಿ ತಾಣ ಬೇಲೂರು ಪಟ್ಟಣದಲ್ಲಿ ಗುಡಿಸಲು, ತಗಡಿನ ಶೀಟಿನ ಮನೆಗಳಿಂದ ಪ್ರವಾಸಿಗರಿಗೆ ಮುಜುಗರವಾಗಬಾರದು ಹಾಗೂ ವಸತಿ ರಹಿತರು ಇರಬಾರದೆಂಬ ಉದ್ದೇಶದಿಂದ ರಾಯಾಪುರದಲ್ಲಿ ಪುರಸಭೆಗೆ ಮೀಸಲಾದ ನಿವೇಶನಗಳ ಸಮೀಪ ಮೂಲ ಸೌಲಭ್ಯ ಕಲ್ಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಆಶ್ರಯ ಯೋಜನೆಗೆ ಸರ್ಕಾರ ಅನುದಾನ ಕೊಡುವುದಿಲ್ಲ. ಆದರೆ ಇಲ್ಲಿನ ನಿವಾಸಿಗಳಿಗೆ ಪೂರ್ವ ಬಾವಿಯಾಗೆ ಸೌಲಭ್ಯ ಕಲ್ಪಿಸುವುದಕ್ಕಾಗಿ 30 ಲಕ್ಷ ರೂ. ಅನುದಾನದಲ್ಲಿ ಕಾಮಗಾರಿಗೆ ಕ್ರಮ ಕೈಗೊಳ್ಳಲಾಗುತ್ತಿದೆ. ಇಲ್ಲಿ ಸಾರ್ವಜನಿಕರಿಗೆ ಅನಾನೂಕೂಲ ಆಗಬಾರದೆಂದು ಕೊಳವೇ ಬಾವಿ, ವಿದ್ಯುತ್, ರಸ್ತೆ, ಚರಂಡಿ ಸೇರಿದಂತೆ ಇತರೆ ಕಾಮಗಾರಿಗಳಿಗೆ ಆದ್ಯತೆ ನಿಡಲಾಗಿದೆ. ಮತ್ತು ಇಲ್ಲಿ ಜಮೀನು ಉಳುಮೆ ಮಾಡುತ್ತಿರುವ ಮೂಲ ಮಂಜೂರುದಾರರಿಗೆ ತೊಂದರೆಯಾಗದತೆ ಪುರಸಭೆಗೆ ಮಾತ್ರ ಮೀಸಲಾದ 5 ಎಕರೆ ಜಮೀನಿನಲ್ಲಿ ನಿವೇಶನ ಗುರುತಿಸಿ ಕೆಲಸ ಮಾಡಿಸಲಾಗುತ್ತಿದೆ. ಇಲ್ಲಿ ಎಲ್ಲ ಕೆಲಸಗಳು ಮುಗಿದ ನಂತರ ಶೀಘ್ರವೇ ನಿವೇಶನಗಳನ್ನು ಅರ್ಹರಿಗೆ ವಿತರಿಸಲಾಗುವುದು ಎಂದರು.

ಪುರಸಭೆ ಅಧ್ಯಕ್ಷೆ ಉಷಾ ಸತೀಶ್ ಮಾತನಾಡಿ, ಪುರಸಭೆಯಿಂದ 1995 ರಲ್ಲಿ ನಿವೇಶನ ವಿತರಿಸಲಾಗಿತ್ತು. ನಂತರ ಚನ್ನಕೇಶವ ನಗರದಲ್ಲಿ 2001ರಲ್ಲಿ ವಿತರಿಸಲಾಗಿತ್ತು. ನಂತರ ಇಲ್ಲಿವರೆಗೂ ನಿವೇಶನ ಕೊಡಲು ಸಾಧ್ಯವಾಗಿಲ್ಲ. ಈಗ ರಾಯಾಪುರ ಗ್ರಾಮದಲ್ಲಿ ನಿವೇಶನ ಗುರುತಿಸಿದ್ದು ಇಲ್ಲಿ ವಿತರಿಸಲು ಕ್ರಮ ಕೈಗೊಳ್ಳಲಾಗುವುದು. ಮತ್ತು ಅರಸೀಕೆರೆಯಲ್ಲಿರುವ ಎಎಚ್ ಪ್ರಾಜೆಕ್ಟ್ ರೀತಿಯಲ್ಲಿ +3 ಮಾದರಿಯಲ್ಲಿ ಒಂದೇ ನಿವೇಶನದಲ್ಲಿ ಮೂರು ಮನೆಗಳನ್ನು ಕಟ್ಟಿಸಿ ಕೊಟ್ಟಲ್ಲಿ ಅನುಕೂಲವಾಗುತ್ತದೆ ಎಂದರು.

ಪುರಸಭೆ ಸದಸ್ಯರಾದ ಎ.ಆರ್. ಅಶೋಕ್, ಮೀನಾಕ್ಷಿ ವೆಂಕಟೇಶ್, ಪ್ರಭಾಕರ್, ಆಶ್ರಯ ಸಮಿತಿ ಸದಸ್ಯರಾದ ಹರೀಶ್, ಇಕ್ಬಾಲ್, ನಾಗೇಶ್, ತಹಸೀಲ್ದಾರ್ ಶ್ರೀಧರ್ ಕಂಕಣವಾಡಿ, ಪುರಸಭೆ ಇಂಜಿನಿಯರ್ ಮೋಹನ್, ಆರ್‌ಐ ಲಕ್ಷಣ್ ಸೇರಿ ಇತರರಿದ್ದರು.

# ಪ್ರಾಮಾಣಿಕ ಪ್ರಯತ್ನಕ್ಕೆ ಪ್ರತಿಫಲ ಖಚಿತ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಶ್ರಮ ಹಾಗು ಪ್ರಾಮಾಣಿಕ ದಾರಿಯಲ್ಲಿ ಸಾಗಿದರೆ ಸಕಾರಾತ್ಮಕ ಪ್ರತಿಫಲ ಖಂಡಿತ ಸಿಗುತ್ತದೆಂದು ಸ್ಕಾಲರ್ಸ್ ಅಂತಾರಾಷ್ಟ್ರೀಯ ಶಾಲೆಯ ಆಡಳಿತಾಧಿಕಾರಿ ಡಾ.ಹೆಚ್.ಎನ್.ಚಂದ್ರಶೇಖರ್ ಅವರು ಹೇಳಿದರು.

ಸ್ಕಾಲರ್ಸ್ ಶಾಲೆಯಲ್ಲಿ ಶನಿವಾರ ಏರ್ಪಡಿಸಿದ್ದ ತಾಯಂದಿರಿಗಾಗಿ ರಂಗೋಲಿ ಸ್ಪರ್ಧೆ ಮತ್ತು ಮಕ್ಕಳಿಗಾಗಿ ಸವಿರುಚಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿ, ಔಪಚಾರಿಕ ಶಿಕ್ಷಣ ಮಾತ್ರ ಶಿಕ್ಷಣವಲ್ಲ. ಬೇರೆಯವರೊಂದಿಗಿನ ಮಾತು, ಸಂಸ್ಕಾರ, ನಡವಳಿಕೆ ಹಾಗು ವ್ಯವಹಾರ ಜ್ಞಾನವೂ ಶಿಕ್ಷಣವೇ ಆಗಿದೆಯೆಂದರು.

ಮಕ್ಕಳ ಬೆಳವಣಿಗೆಯಲ್ಲಿ ಪೋಷಕರ ಜವಾಬ್ದಾರಿ ಹೆಚ್ಚಿದೆ. ಮಕ್ಕಳನ್ನು ಕೇವಲ ಅಂಕ ಗಳಿಕೆಯ ಯಂತ್ರಗಳನ್ನಾಗಿಸದೆ ಅವರಲ್ಲಿ ಮಾನವೀಯ ಮೌಲ್ಯ, ಸಂಸ್ಕಾರ ಕಲಿಸಬೇಕು. ಪಠ್ಯ ಪುಸ್ತಕ ಅಧ್ಯಯನವಷ್ಟೇ ಜ್ಞಾನಾರ್ಜನೆಯಲ್ಲ ಎಂದರು.

ತಾಯಂದಿರು ರಂಗೋಲಿ ಸ್ಪರ್ಧೆಯಲ್ಲಿ ಭಾಗವಹಿಸಿ ಸಂಭ್ರಮಿಸಿದರು. ವಿಜೇತರಿಗೆ ಬಹುಮಾನ ವಿತರಿಸಲಾಯಿತು. ಶಾಲೆಯ ಆವರಣದಲ್ಲಿ ಮಕ್ಕಳಿಗಾಗಿ ಸವಿರುಚಿ ಕಾರ್ಯಕ್ರಮ ಏರ್ಪಡಿಸಲಾಗಿತ್ತು. ವಿದ್ಯಾರ್ಥಿಗಳು ವಿಧ ವಿಧವಾದ ತಿನಿಸುಗಳನ್ನು ಮಾರಾಟ ಮಾಡುವುದರ ಮೂಲಕ ಸ್ವ ಅನುಭವ ಪಡೆದರು. ಸಂಸ್ಥೆಯ ಕಾರ್ಯದರ್ಶಿ ಮಮತಾ ಚಂದ್ರಶೇಖರ್, ಸಿಬ್ಬಂದಿ ಹಾಗು ಪೋಷಕರು ಹಾಜರಿದ್ದರು.

# ತಾಯಿ ಕೊಂದ ಪುತ್ರನಿಗೆ 6 ವರ್ಷ ಜೈಲು ಶಿಕ್ಷೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಚಿನ್ನಾಭರಣ ಗಿರವಿ ಇಟ್ಟಿದ್ದರ ಚೀಟಿ ಕೊಡುವಂತೆ ಕೇಳಿದ್ದ ತಾಯಿಯನ್ನು ಮರದ ತುಂಡಿನಿಂದ ಹೊಡೆದು ಕೊಲೆಗೈದಿದ್ದ ಪುತ್ರನಿಗೆ 6 ವರ್ಷ ಕಠಿಣ ಕಾರಾಗೃಹ ಶಿಕ್ಷೆ ಹಾಗೂ 10 ಸಾವಿರ ರೂ. ದಂಡ ವಿಧಿಸಿ ಜಿಲ್ಲಾ ನ್ಯಾಯಾಲಯ ತೀರ್ಪು ನೀಡಿದೆ.

ತಾಲೂಕಿನ ಸಂಕಲಾಪುರದ ನಂಜೇಶಗೌಡ ಪಾಲಾಕ್ಷ ಅಪರಾಧಿ. ತಾಯಿ ಸಣ್ಣಮ್ಮ ಮೃತರು. ನಂಜೇಶಗೌಡ ತನ್ನ ತಾಯಿ, ಹೆಂಡತಿ ಹಾಗೂ ಇಬ್ಬರು ಮಕ್ಕಳೊಂದಿಗೆ ವಾಸವಿದ್ದರು. ಗಾರ್ಮೆಂಟ್ಸ್ ಕೆಲಸಕ್ಕೆ ಹೋಗುತ್ತಿದ್ದ ನಂಜೇಶಗೌಡ ಇತ್ತೀಚೆಗೆ ಮದ್ಯದ ದಾಸರಾಗಿ ಮನೆಯಲ್ಲೇ ಇರುತ್ತಿದ್ದರು. ಕುಡಿಯಲು ಹಣ ಕೊಡುವಂತೆ ಯಾವಾಗಲೂ ಗಲಾಟೆ ಮಾಡುತ್ತಿದ್ದರು. ಪತ್ನಿ ಹಾಗೂ ಮಕ್ಕಳು ಹೋಟೆಲ್ ಮಾಡಿಕೊಂಡು ಬದುಕು ನಡೆಸುತ್ತಿದ್ದಾರೆ.



ಭೋಗ್ಯಕ್ಕೆ ಮನೆ ಪಡೆದಿದ್ದ ನಂಜೇಶಗೌಡರ ಪತ್ನಿ ಹಣ ಹೊಂದಿಸಲು ತಮ್ಮ ಚಿನ್ನಾಭರಣಗಳನ್ನು ಬ್ಯಾಂಕ್‌ನಲ್ಲಿ ಗಿರವಿ ಇಟ್ಟಿದ್ದರು. ಆದರೆ, ಅದರ ಚೀಟಿ ನಂಜೇಶಗೌಡರ ಬಳಿ ಇತ್ತು. ಅದನ್ನು ಕೊಡುವಂತೆ ತಾಯಿ ಸಣ್ಣಮ್ಮ ಮತ್ತು ಪತ್ನಿ ಯಾವಾಗಲೂ ಕೇಳುತ್ತಿದ್ದರು. ಈ ವಿಚಾರವಾಗಿ ಆಗಾಗ ಗಲಾಟೆ ಆಗುತ್ತಿದ್ದವು. ಒಂದು ದಿನ ಇದೇ ವಿಚಾರವಾಗಿ ಜಗಳ ಶುರುವಾದಾಗ ಕುಡಿದ ಅಮಲಿನಲ್ಲಿ ನಂಜೇಶಗೌಡನು ಮರದ ತುಂಡಿನಿಂದ ತಾಯಿಯ ತಲೆಗೆ ಹೊಡೆದಿದ್ದ. ಗಂಭೀರ ಗಾಯಗೊಂಡಿದ್ದ ಸಣ್ಣಮ್ಮ ಸ್ಥಳದಲ್ಲೇ ಮೃತಪಟ್ಟಿದ್ದರು. ನಂತರ ಹೋಟೆಲ್ ಕೆಲಸಕ್ಕೆ ತೆರಳಿದ್ದ ಪತ್ನಿಯ ಬಳಿಗೆ ತೆರಳಿ ಅವರ ಮೇಲೂ ಹಲ್ಲೆ ನಡೆಸಿದ್ದ. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದ ಗ್ರಾಮಾಂತರ ಠಾಣೆ ಪೊಲೀಸರು ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ 2ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಎಸ್ .ಎ. ಹಿದಾಯತ್ ಉಲ್ಲಾ ಷರೀಫ್ ಅವರು ನಂಜೇಶಗೌಡರ ಮೇಲಿರುವ ದೋಷಾರೋಪ ಸಾಬೀತಾಗಿದೆಯೆಂದು 6 ವರ್ಷ ಕಠಿಣ ಕಾರಾಗೃಹವಾಸ ಶಿಕ್ಷೆ ಮತ್ತು 10 ಸಾವಿರ ರೂ. ದಂಡ ವಿಧಿಸಿದ್ದಾರೆ. ಸರ್ಕಾರದ ಪರವಾಗಿ ಪಾರ್ವತಿ ವಾದ ಮಂಡಿಸಿದ್ದರು.

# ಸೋಂಪುರ ಗ್ರಾಮದಲ್ಲಿ ಭೋವಿ ಸಮುದಾಯ ಭವನಕ್ಕೆ ಭೂಮಿಪೂಜೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ತಾಲೂಕಿನ ಸೋಂಪುರ ಗ್ರಾಮದಲ್ಲಿ ಶ್ರೀ ಸಿದ್ಧರಾಮೇಶ್ವರ ಭೋವಿ ಸಮುದಾಯ ಭವನ ಕಾಮಗಾರಿಗೆ ಶಾಸಕ ಎಚ್.ಕೆ.ಸುರೇಶ್ ಭೂಮಿಪೂಜೆ ನೆರವೇರಿಸಿದರು.

ಈ ವೇಳೆ ಮಾತನಾಡಿದ ಅವರು, ಹಿಂದುಳಿದ ಸಮಾಜವಾದ ಭೋವಿ ಸಮಾಜದ ಅಭಿವೃದ್ಧಿಗೆ ಒತ್ತು ಕೊಡುವ ನಿಟ್ಟಿನಲ್ಲಿ ಶ್ರೀ ಸಿದ್ಧರಾಮೇಶ್ವರ ಭೋವಿ ಸಮುದಾಯ ಭವನಕ್ಕೆ ನಿರ್ಮಿಸಲು ಸಮಾಜ ಕಲ್ಯಾಣ ಇಲಾಖೆಯಿಂದ ಕ್ರಮ ಕೈಗೊಳ್ಳಲಾಗುತ್ತಿದೆ. ಜತೆಗೆ ಭೋವಿ ಸಮುದಾಯಕ್ಕೆ ಒಂದು ಭವನ ಬೇಕೆಂಬ ನಿಟ್ಟಿನಲ್ಲಿ ಮುಖಂಡರು ಮನವಿ ಮಾಡಿದ್ದರು. ಈ ಹಿನ್ನೆಲೆಯಲ್ಲಿ ಜಾಗವನ್ನು ಗುರುತಿಸಿ ಭವನ ನಿರ್ಮಾಣಕ್ಕೆ ಸರ್ಕಾರದಿಂದ ಹಣ ಮಂಜೂರು ಮಾಡಿಸಿ ತಂದು 1 ಕೋಟಿ ರೂ. ಅನುದಾನದಲ್ಲಿ



ಕೆಲಸ ಮಾಡಿಸಲು ಭೂಮಿಪೂಜೆ ನೆರವೇರಿಸಲಾಗುತ್ತಿದೆ. ಗುತ್ತಿಗೆದಾರರು ಇಲ್ಲಿ ಗುಣಮಟ್ಟದ ಕೆಲಸ ಮಾಡಬೇಕು. ಮುಂದಿನ ದಿನಗಳಲ್ಲಿ ಭವನಕ್ಕೆ ಮತ್ತು ಜನಸಾಮಾನ್ಯರಿಗೆ ಅನುಕೂಲವಾಗುಂತೆ ಮೂಲ ಸೌಲಭ್ಯ ಕಲ್ಪಿಸಿಕೊಡಲಾಗುವುದು. ಭೋವಿ ಸಮುದಾಯ ಮೊದಲಿನಿಂದಲೂ ನನ್ನೊಟ್ಟಿಗೆ ಇದ್ದರೂ ಏನನ್ನೂ ಕೇಳಿರಲಿಲ್ಲ. ಮುಂದೆ ಭೋವಿ ಸಮಾಜಕ್ಕೆ ಹೆಚ್ಚಿನ ಕೆಲಸ ಮಾಡಿಸಲಾಗುವುದು. ಮತ್ತು ಇಲ್ಲಿ ಸರ್ಕಾರಿ ಭೂಮಿ ಉಳುಮೆ ಮಾಡುವ ಜನರಿಗೂ ಬೇರೆಡೆ ಸ್ಥಳವನ್ನು ಕಲ್ಪಿಸಿ ಕೊಡಲು ಕ್ರಮ ಕೈಗೊಳ್ಳಲಾಗುವುದು. ಇಷ್ಟೆ ಅಲ್ಲದೆ ಈಗಾಗಲೇ ಕ್ಷೇತ್ರದಲ್ಲಿ ಹೆಚ್ಚು ಸಮುದಾಯ ಭವನಗಳನ್ನು ತಂದಿದ್ದರಿಂದ ಕೆಲಸ ಮಾಡಿಸಲಾಗುತ್ತಿದೆ. ಇದರೊಂದಿಗೆ ಕ್ಷೇತ್ರದ ಸಮಗ್ರ ಅಭಿವೃದ್ಧಿಗೂ ಹೆಚ್ಚಿನ ಕಾಳಜಿ ವಹಿಸಿ ಅನುದಾನ ತಂದು ಕೆಲಸ ಮಾಡಿಸಲಾಗುವುದು ಎಂದರು.

ಭೋವಿ ಸಮಾಜದ ಜಿಲ್ಲಾಧ್ಯಕ್ಷ ರಂಗನಾಥ್ ಮಾತನಾಡಿ, ನಮಗೆ ಸಮುದಾಯ ಭವನಕ್ಕೆ ಜಾಗ ಕೊಡುವ ಮೂಲಕ ಸಮಾಜಕ್ಕೆ ಉತ್ತಮ ಕೆಲಸ ಮಾಡಿ ಕೊಡುತ್ತಿದ್ದಾರೆ. ಮುಂದಿನ ದಿನಗಳಲ್ಲಿ ಇದಕ್ಕೆ ಬೇಕಾದ ಮೂಲ ಸೌಕರ್ಯಗಳನ್ನು ಮತ್ತು ಹೆಚ್ಚಿನ ಕೆಲಸಗಳನ್ನು ಮಾಡಿಸಿ ಕೊಡಲು ಶಾಸಕರು ಮುಂದಾಗಲಿದ್ದಾರೆ ಎಂಬ ಭರವಸೆ ಇದೆ. ನಾವು ಮತ್ತು ಸಮುದಾಯ ಸದಾ ಶಾಸಕರೊಂದಿಗೆ ಇರುತ್ತೇವೆ ಎಂದರು.

ಭೋವಿ ಸಮಾಜದ ತಾಲೂಕು ಅಧ್ಯಕ್ಷ ಪರಮೇಶ್, ತಹಸೀಲ್ದಾರ್ ಶ್ರೀಧರ್ ಕಂಕನವಾಡಿ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಗ್ರೇಡ್-1 ಲಿಂಗರಾಜು, ಪೊಲೀಸ್ ಇನ್ಸಪೆಕ್ಟರ್ ರೇವಣ್ಣ, ಲೋಕೋಪಯೋಗಿ ಇಲಾಖೆ ಎಇಇ ಕೃಷ್ಣೇಗೌಡ, ಭೋವಿ ಸಮಾಜದ ಮುಖಂಡರಾದ ಮಹೇಶ್, ರಮೇಶ್, ರಾವಾಭೋವಿ, ದೇವರಾಜು ಇತರರಿದ್ದರು.

# ಧರ್ಮಸ್ಥಳ ಸಂಘದಿಂದ 112 ಜನರಿಗೆ ವಾತ್ಸಲ್ಯ ಕಿಟ್ ವಿತರಣೆ

ಆಲೂರು: ಧರ್ಮಸ್ಥಳ ಧರ್ಮಾಧಿಕಾರಿ ಡಾ. ಡಿ. ವೀರೇಂದ್ರ ಹೆಗ್ಗಡೆ ಅವರ ಪರಿಕಲ್ಪನೆಯಲ್ಲಿ ಸ್ವಾವಲಂಬಿ ಸುಖಿ ಕುಟುಂಬವನ್ನು ನಿರ್ಮಾಣ ಮಾಡಲಾಗುತ್ತಿದೆ ಎಂದು ಪ್ರಾದೇಶಿಕ ಕಚೇರಿ ಜ್ಞಾನವಿಕಾಸ ಯೋಜನಾಧಿಕಾರಿ ಮೂಕಾಂಬಿಕ ತಿಳಿಸಿದರು.

ನೇರಲಕೆರೆ ಕೊಪ್ಪಲು ಗ್ರಾಮದ ರಂಗಮ್ಮ ವೃದ್ಧ ದಂಪತಿಗಳ ಕುಟುಂಬಕ್ಕೆ ವಾತ್ಸಲ್ಯ ಕಿಟ್ ವಿತರಣೆ ಮಾಡಿ ಮಾತನಾಡಿ, ಸ್ವಾವಲಂಬನೆಗಾಗಿ ಪ್ರಯತ್ನಿಸಲು ಸಾಧ್ಯವಾಗದಂತಹ ಅಸಹಾಯಕ ಕುಟುಂಬ, ವ್ಯಕ್ತಿಗಳು ನಮ್ಮ ನಡುವೆ ಇದ್ದಾರೆ. ಇಂತಹವರಿಗೆ ಸದಾಕಾಲ ಸಹಾಯಹಸ್ತದ ಅಗತ್ಯವಿರುತ್ತದೆ. ಸರ್ವೇಕ್ಷಣಾ



ವರದಿಯ ಆಧಾರದಂತೆ ನಿರ್ಗತಿಕ ಫಲಾನುಭವಿಗಳಿಗೆ, ಮಾಸಾಶನ ಪಡೆಯಲು ಅರ್ಹತೆ ಇರುವ ಬಡ ಕುಟುಂಬಗಳನ್ನು ಗುರುತಿಸಿ, ಅಗತ್ಯ ಸೌಲಭ್ಯಗಳಾದ ಬಟ್ಟೆ, ಹೊದಿಕೆ ಮತ್ತು ಪಾತ್ರೆಗಳನ್ನು ಕಿಟ್ ರುಪದಲ್ಲಿ ಉಚಿತವಾಗಿ ವಿತರಿಸಲಾಗುತ್ತಿದೆ ಎಂದರು.

ಕ್ಷೇತ್ರ ಯೋಜನಾಧಿಕಾರಿ ರತ್ನಾಕರ ಕೊಠಾರಿ ಮಾತನಾಡಿ, ಗ್ರಾಮಗಳಲ್ಲಿರುವ ದುರ್ಬಲರು, ವಯೋವೃದ್ಧರು, ಅಂಗವಿಕಲ ಮಕ್ಕಳಿಗೆ ಸೇರಿ 112 ಜನರಿಗೆ ಮಾಸಾಶನ ನೀಡುವ ಕಾಯಕವನ್ನು ಮಾಡುವಲ್ಲಿ ಗ್ರಾಮಾಭಿವೃದ್ಧಿ ಯೋಜನೆ ಕಾರ್ಯೋನ್ಮುಖವಾಗಿದೆ. ಬಡ ಜನರ ಸಮಸ್ಯೆಗಳನ್ನು ಮನೆಗಳಿಗೆ ಭೇಟಿ ನೀಡಿ ಪರಿಶೀಲಿಸಿ ಸಮಸ್ಯೆಗಳಿಗೆ ಗ್ರಾಮಾಭಿವೃದ್ಧಿ ಯೋಜನೆ ಸ್ಪಂದಿಸುತ್ತಿದೆ ಎಂದರು.

ಬೆಳ್ಳಾವರ ಈರಮ್ಮ, ಅಂಚಿಹಳ್ಳಿ ಪಾರ್ವತಮ್ಮ, ರಂಗಮ್ಮ, ಮದಘಟ್ಟ ಹೂವಮ್ಮ, ಸಾವಿತ್ರಮ್ಮ, ಅಂಕಪುರ ಚಿನ್ನಮ್ಮ, ಬೈಲಹಳ್ಳಿ ಶಿವಮ್ಮ, ಕಟ್ಟಾಯ ಲಕ್ಷ್ಮಮ್ಮ ಅವರಿಗೆ ಕಿಟ್ ವಿತರಿಸಲಾಯಿತು. ಜ್ಞಾನವಿಕಾಸ ಸಮನ್ವಯಧಿಕಾರಿ ಜಿ. ಸರಸ್ವತಿ, ಗಿರೀಶ್, ಸೇವಾ ಪ್ರತಿನಿದಿ ರೂಪ ಉಪಸ್ಥಿತರಿದ್ದರು.

# 40 ಲಕ್ಷರೂ. ಮೌಲ್ಯದ ಗಾಂಜಾ ನಾಶ

ಹಾಸನ: ಜಿಲ್ಲೆಯ ವಿವಿಧೆಡೆ ಪೊಲೀಸರು ದಾಳಿ ನಡೆಸಿ 76 ಪ್ರಕರಣಗಳಲ್ಲಿ ವಶಪಡಿಸಿಕೊಂಡಿದ್ದ 127 ಕೆ.ಜಿ. ಅಂದಾಜು 40 ಲಕ್ಷರೂ. ಮೌಲ್ಯದ ಗಾಂಜಾವನ್ನು ನಗರ ಹೊರವಲಯದ ಕೆಐಎಡಿಬಿ ಸರ್ಕಲ್‌ನಲ್ಲಿರುವ ಸರ್ಕಾರಿ ತ್ಯಾಜ್ಯ ನಿರ್ವಹಣಾ ಘಟಕದಲ್ಲಿ ನಾಶಪಡಿಸಲಾಯಿತು. ಎನ್‌ಡಿಪಿಎಸ್ ಆ್ಯಕ್ಟ್‌ನಡಿ ನಗರದ ಸೇರಿ ಜಿಲ್ಲೆಯ ಎಂಟು ವಲಯಗಳ ವ್ಯಾಪ್ತಿಯಲ್ಲಿ ಅಕ್ರಮವಾಗಿ ಗಾಂಜಾ ಮಾರಾಟ ಮಾಡುತ್ತಿರುವುದನ್ನು ಪತ್ತೆ ಹಚ್ಚಿದ ಪೊಲೀಸರು, 76 ಪ್ರಕರಣಗಳಲ್ಲಿ ಒಟ್ಟು 64 ಕೆಜಿ ಒಣ ಗಾಂಜಾ ಹಾಗೂ 63 ಕೆಜಿ ಹಸಿ ಗಾಂಜಾವನ್ನು ವಶಪಡಿಸಿಕೊಳ್ಳಲಾಗಿತ್ತು. ಈ ಬಗ್ಗೆ ಅಬಕಾರಿ ಇಲಾಖೆ ಅಧಿಕಾರಿಗಳು ನ್ಯಾಯಾಲಯದಿಂದ ಅನುಮತಿ ಪಡೆದು ಮೈಸೂರು ವಿಭಾಗದ ಜಂಟಿ ಆಯುಕ್ತ ಬಸವರಾಜು ಅಡಪದ ಅವರ ಸಮ್ಮುಖದಲ್ಲಿ ಗಾಂಜಾ ನಾಶಪಡಿಸಿದ ಅಬಕಾರಿ ಇಲಾಖೆ ಅಧಿಕಾರಿಗಳು ನಾಶಪಡಿಸಿದರು.



# ಫೆ.26 ರಂದು ಕಾರ್ಯಾಗಾರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ : ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ, ಹಾಗೂ ಟೆಕ್ಸಾ ಕ್, ಬೆಂಗಳೂರುರವರ ಸಂಯುಕ್ತಾಶ್ರದಲ್ಲಿ ಫೆ,26 ರಂದು ಬೆಳಗ್ಗೆ 10 ಗಂಟೆಗೆ ನವಕಿಸ್ ಕಾಲೇಜು ಆಫ್ ಇಂಜಿನಿಯರಿಂಗ್‌ನಲ್ಲಿ ಒಂದು ದಿನದ ಕಾರ್ಯಗಾರವನ್ನು ಆಯೋಜಿಸಲಾಗಿದೆ.

ಉದ್ದಿಮೆದಾರರು ಭಾಗವಹಿಸಿ ಸದರಿ ಕಾರ್ಯಗಾರಗಳ ಸದುಪಯೋಗ ಪಡೆದುಕೊಳ್ಳಬೇಕೆಂದು ಹಾಗೂ ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ-08172-296217, 240606 ಅಥವಾ ಜಿಲ್ಲಾ ಕೈಗಾರಿಕಾ ಕೇಂದ್ರ, ಡೈರಿ ಸರ್ಕಲ್, ಹಾಸನ ಸಂಪರ್ಕಿಸುವಂತೆ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

# ಇತಿಹಾಸದಲ್ಲಿ ಈ ದಿನ

## ಫೆಬ್ರವರಿ-08

**1587:** ಇಂಗ್ಲೆಂಡ್‌ನ ರಾಣಿ ಮೇರಿ ಅವರಿಗೆ ಮರಣದಂಡನೆ ವಿಧಿಸಲಾಯಿತು.

**1924:** ಅಮೆರಿಕಾದ ನೆವಾಡಾ ರಾಜ್ಯದಲ್ಲಿ ಮೊದಲ ಬಾರಿಗೆ ಅನಿಲ ಕೋಣೆ ಮೂಲಕ ಮರಣದಂಡನೆ ಜರುಗಿತು.

**1960:** ಹಾಲಿವುಡ್ ವಾಕ್ ಆಫ್ ಫೇಮ್ ಅಧಿಕೃತವಾಗಿ ಸ್ಥಾಪಿಸಲಾಯಿತು.

**1971:** ವಿಶ್ವದ ಮೊದಲ ಎಲೆಕ್ಟ್ರಾನಿಕ್ ಷೇರು ಮಾರುಕಟ್ಟೆ ನ್ಯಾಸ್ಡಾಕ್ ಪ್ರಾರಂಭವಾಯಿತು.

**2002:** ಅಮೆರಿಕದ ಸಾಲ್ಟ್ ಲೇಕ್ ಸಿಟಿಯಲ್ಲಿ ಶೀತಕಾಲೀನ ಒಲಿಂಪಿಕ್ ಕ್ರೀಡಾಕೂಟ ಆರಂಭವಾಯಿತು.

**ಜನನ**


**1834:** ರಷ್ಯಾದ ರಸಾಯನಶಾಸ್ತ್ರಜ್ಞ ದಿಮಿತ್ರಿ ಮೆಂಡೆಲೀವ್

# ಪ್ರವಾಸಿ ತಾಣಗಳು ಸಂಸ್ಕೃತಿಯ ಪ್ರತಿಬಿಂಬ-ಪ್ರವಾಸ ಕಥನ

**- ಕೆ.ಎನ್. ಚಿದಾನಂದ, ಸಹ ಶಿಕ್ಷಕರು ಹಾಸನ**

ಇತಿಹಾಸವು ಆಧಾರಗಳಿಂದಲೇ ಸೃಷ್ಟಿಯಾಗಿದೆ. ಆಧಾರಗಳಿಲ್ಲದೆ ಇತಿಹಾಸವಿಲ್ಲ. ಒಂದು ಸ್ಥಳದಲ್ಲಿ ದೊರೆತ ಸಾಹಿತ್ಯ, ನಾಣ್ಯ, ಶಾಸನ, ಸ್ಮಾರಕ, ದೇವಾಲಯ, ಮುಂತಾದವುಗಳು ತನ್ನದೇ ಚರಿತ್ರೆಯನ್ನು ಜಗತ್ತಿಗೆ ಸಾರುತ್ತವೆ. ಕಾಲ ಎಲ್ಲವನ್ನು ಮೆರೆಸುತ್ತದೆ ಮತ್ತು ಎಲ್ಲವನ್ನು ಮರೆಸುತ್ತದೆ. ಆದರೆ ಅಲ್ಲಿ ಉಳಿಯುವ ಸಾಕ್ಷಿಗಳು ಮತ್ತೆ ಮತ್ತೆ ನೆನಪುಗಳನ್ನು ಮರುಕಳಿಸುತ್ತದೆ. ಕಾಲದ ಹೆಜ್ಜೆ ಗುರುತುಗಳನ್ನು ಹುಡುಕುವುದು ಎಂದರೆ ಒಂದು ಅನ್ವೇಷಣೆಯೇ ಸರಿ. ದೇಶ ಸುತ್ತು ಕೋಶ ಓದು ಎಂಬ ಜನಜನಿತವಾದ ಗಾದೆ ಮಾತು ಕೇವಲ ಜ್ಞಾನಾರ್ಜನೆಯ ಮಾರ್ಗವಲ್ಲ. ಅದು ಮನುಷ್ಯನ ಅಸ್ತಿತ್ವದ ವಿಸ್ತರಣೆಯ ಸಂಕೇತವೂ ಹೌದು. ಇಡೀ ಪ್ರಪಂಚವನ್ನು ಒಂದು ಮಹತ್ತರವಾದ ಗ್ರಂಥವೆಂದು ಭಾವಿಸುವುವಾದರೆ, ಪ್ರೇಕ್ಷಣೀಯ ಸ್ಥಳಗಳು ಆ ಗ್ರಂಥದ ಒಂದೊಂದು ಅಮೂಲ್ಯವಾದ ಅಧ್ಯಾಯಗಳು ಎನ್ನಬಹುದು. ನಾಗರಿಕತೆಯ ಆರಂಭದಿಂದ ಇಂದಿನ ಆಧುನಿಕ ಯುಗದವರೆಗೆ, ಮನುಷ್ಯ ಹೊಸತನ್ನು ಹುಡುಕುತ್ತಾ, ಪ್ರಕೃತಿಯ ಸೊಬಗನ್ನು ಆರಾಧಿಸುತ್ತಾ ಮತ್ತು ಪೂರ್ವಜರು ಬಿಟ್ಟು ಹೋದ ಸ್ಮಾರಕಗಳ ಮೌನ ಸಂಭಾಷಣೆಯನ್ನು ಆಲಿಸುತ್ತಾ ಸಾಗಿದ್ದಾನೆ. ಪ್ರವಾಸವೆಂಬುದು ಹೊಸ ಚೇತನವನ್ನು ತುಂಬುವ ಪಯಣವಾಗಿದೆ. ಪ್ರವಾಸವೆಂದರೆ ಕೇವಲ ಒಂದು ಭೌಗೋಳಿಕ ಬಿಂದುವಿನಿಂದ ಮತ್ತೊಂದು ಬಿಂದುವಿಗೆ ಚಲಿಸುವುದಲ್ಲ. ಅದು ನಮ್ಮೊಳಗಿನ ಸಂಕುಚಿತ ಭಾವನೆಗಳನ್ನು ಕಿತ್ತೆಸೆದು, ವಿಶಾಲವಾದ ವಿಶ್ವದೊಂದಿಗೆ ಮೇಳೈಸುವ ಪ್ರಕ್ರಿಯೆಯಾಗಿದೆ. ಒಂದು ಕಲ್ಲಿನ ಕೆತ್ತನೆಯಲ್ಲಿ ಅಡಗಿರುವ ಶಿಲ್ಪಿಯ ಶ್ರಮ, ಗೋಪುರದ ಭವ್ಯತೆ ಅಥವಾ ಪ್ರಕೃತಿಯ ಮಡಿಲಲ್ಲಿ ಹರಿಯುವ ಜಲಪಾತದ ನಿನಾದ ಇವೆಲ್ಲವೂ ನಮಗೆ ಬದುಕಿನ ಅರ್ಥವನ್ನು ಹೊಸದಾಗಿ ಕಲಿಸಿಕೊಡುತ್ತವೆ.

ನನ್ನ ಹಿತೈಷಿ ಸ್ನೇಹಿತರಾದ ಗೊರೂರು ಅನಂತರಾಜು ಅವರು ಹೆಸರೇ ಹೇಳುವಂತೆ ಗೊರೂರಿನವರು. ಇವರ




ಬರಹದ ಹವ್ಯಾಸ ನಿಲ್ಲದ ಪಯಣವಾಗಿದೆ. ತನಗೆ ಗೊತ್ತಿರುವ ವಿಷಯದೊಂದಿಗೆ ಮತ್ತಷ್ಟು ಅಧ್ಯಯನ, ವಿಷಯ ಸಂಗ್ರಹದ ಮೂಲಕ ಲೇಖನಗಳನ್ನು ಪ್ರಕಟಿಸುತ್ತಿರುವ ಇವರು ಅವೆಲ್ಲವನ್ನು ಒಟ್ಟಾಗಿಸಿ ಓದುಗರಿಗೆ ಒಂದೆಡೆ ಸಿಗುವಂತೆ ಮಾಡಿರುವ ಈ ಪ್ರಯತ್ನ ನಿಜಕ್ಕೂ ಶ್ಲಾಘನೀಯವಾದುದು. ಗೊರೂರು ಅನಂತರಾಜುರವರು ಪ್ರವಾಸಿ ಸ್ಥಳಗಳಿಗೆ ಭೇಟಿ ನೀಡುವ ಮೂಲಕ ಸುಮ್ಮನಾಗಲಿಲ್ಲ. ಬದಲಾಗಿ ಆ ಸ್ಥಳದ ಕುರಿತು ಮಾಹಿತಿ ಸಂಗ್ರಹಿಸಿ ಓದುಗ ಬಳಗಕ್ಕೆ ಉಣಬಡಿಸಿದ್ದಾರೆ. ಎಡತೊರೆ ಎನಿಸಿದ ಕಾವೇರಿ ನದಿಯ ತಟದಲ್ಲಿ ನಿರ್ಮಾಣಗೊಂಡಿರುವ ಅರ್ಕೇಶ್ವರ ದೇವಾಲಯ ಕುರಿತ ಮಾಹಿತಿ ನೀಡಿದ್ದಾರೆ. ಮೂಗೂರಿನ ತ್ರಿಪುರ ಸುಂದರಿ ದೇವಾಲಯದ ಕುರಿತ ಮಾಹಿತಿ ವಿಚಾರ ಪೂರ್ಣವಾಗಿದೆ. ತಲಕಾಡಿನಲ್ಲಿ ಪಂಚಲಿಂಗ ದರ್ಶನದ ಬಗೆಗೆ ನೀಡಿರುವ ಮಾಹಿತಿ, ಅಲಮೇಲಮ್ಮನ ವಿಚಾರ, ಕಾವೇರಿ ತಟದಲ್ಲಿನ ಮರಳರಾಶಿ, ಗಂಗ ಇತಿಹಾಸದ ಬಗ್ಗೆ ಬೆಳಕು ಚೆಲ್ಲಿರುವರು. ಬಿಳಿಗಿರಿರಂಗನ ಬೆಟ್ಟದಲ್ಲಿ ನೆಲೆಸಿರುವ ರಂಗನಾಥ ಸ್ವಾಮಿಯ ದೇವಾಲಯದ ಕುರಿತು ನೀಡಿರುವ ಮಾಹಿತಿ ಓದುಗರಿಗೆ ಅತ್ಯುಪಯುಕ್ತವಾಗಿದೆ.

ಬೆಲಗೂರಿನ ಹಾಲು ರಾಮೇಶ್ವರ ದೇವಾಲಯದ ಐತಿಹ್ಯವನ್ನು ತಿಳಿಯುತ್ತಾ ಓದು ಮುಂದುವರಿದಾಗ ಅನಂತರಾಜು ಅವರ ಹುಟ್ಟೂರಾದ ಗೊರೂರಿನ ತ್ರಿಕೂಟಲಿಂಗೇಶ್ವರ ದೇವಾಲಯ ಮಾಹಿತಿ ದೊರಕುತ್ತದೆ. ಪ್ರವಾಸಿ ತಾಣಗಳ ಕುರಿತು ತಿಳಿಯುವ ನಮ್ಮ ಓದುವ ಪಯಣ, ಗೊರೂರಿನ ರಥಚಕ್ರಗಳ ಕುರಿತಂತೆ ತಿಳಿಸುತ್ತದೆ. ಚುಂಚನಕಟ್ಟೆಯ ಕೋದಂಡರಾಮನ ದೇವಾಲಯದ ವಿಚಾರವನ್ನು ಲೇಖಕರಾದ ಗೊರೂರು ಅನಂತರಾಜು ರವರು ತುಂಬಾ ಚೆನ್ನಾಗಿ ಓದುಗರಿಗೆ ಕಟ್ಟಿಕೊಟ್ಟಿದ್ದಾರೆ. ಈ ಪ್ರವಾಸ ಕಥನ ಕೇವಲ ಕರ್ನಾಟಕದ ಸ್ಥಳಗಳನ್ನು ಮಾತ್ರವಲ್ಲದೇ ತಮಿಳುನಾಡಿನ ಕುಂಭಕೋಣಂನ ನವಗ್ರಹ ದೇವಾಲಯಗಳವರೆಗೂ ಕರೆದೊಯ್ಯುತ್ತದೆ.

ಒಟ್ಟಿನಲ್ಲಿ ಈ ಕೃತಿಯ ಆಶಯವೇನೆಂದರೆ, ಈ ಕೃತಿಯು ಕೇವಲ ಪ್ರವಾಸಿ ತಾಣಗಳ ಪಟ್ಟಿಯಲ್ಲ. ಇದು ಇತಿಹಾಸ ಮತ್ತು ವರ್ತಮಾನದ ನಡುವಿನ ಸೇತುವೆ. ನಮ್ಮ ನಾಡಿನ ಅಪ್ರತಿಮ ವಾಸ್ತುಶಿಲ್ಪ, ಪ್ರಕೃತಿಯ ಅಚ್ಚರಿಗಳು ಮತ್ತು ಧಾರ್ಮಿಕ ಕೇಂದ್ರಗಳ ಹಿಂದಿರುವ ತಾತ್ವಿಕ ಹಿನ್ನೆಲೆಯನ್ನು ಓದುಗರಿಗೆ ಮನದಟ್ಟು ಮಾಡುವ ಪ್ರಯತ್ನ ಇಲ್ಲಿ ನಡೆದಿದೆ. ಪ್ರತಿಯೊಂದು ಸ್ಥಳಕ್ಕೂ ತನ್ನದೇ ಆದ ಕಥೆಯಿದೆ, ತನ್ನದೇ ಆದ ನೋವು-ನಲಿವುಗಳಿವೆ. ಆ ಸ್ಥಳಗಳ ಮೌನದಲ್ಲಿ ಅಡಗಿರುವ ಇತಿಹಾಸದ ಚೀತ್ಕಾರವನ್ನು ಅಥವಾ ಶಾಂತಿಯನ್ನು ಗುರುತಿಸುವ ದೃಷ್ಟಿಕೋನವನ್ನು ಈ ಬರಹಗಳು ನೀಡುತ್ತವೆ. ಪ್ರವಾಸೀ ತಾಣಗಳು ಸಂಸ್ಕೃತಿಯ ಪ್ರತಿಬಿಂಬವಾಗಿವೆ.

ಒಂದು ಪ್ರೇಕ್ಷಣೀಯ ಸ್ಥಳವು ಒಂದು ಜನಾಂಗದ ಸಂಸ್ಕೃತಿ ಮತ್ತು ಕಲಾಪ್ರೌಢಿಮೆಯ ಕೈಗನ್ನಡಿಯಾಗಿರುತ್ತದೆ. ಹಳೇಬೀಡು-ಬೇಲೂರಿನ ಶಿಲ್ಪಕಲೆಗಳು ಕೇವಲ ಕಲ್ಲುಗಳಲ್ಲ, ಅವು ಅಂದಿನ ಕಾಲದ ಜನರ ಸೌಂದರ್ಯ ಪ್ರಜ್ಞೆಯ ಸಾಕಾರ ರೂಪಗಳು. ಹಾಗೆಯೇ, ಪಶ್ಚಿಮ ಘಟ್ಟಗಳ ಹಸಿರು ಕೇವಲ ಅರಣ್ಯವಲ್ಲ, ಅದು ನಮ್ಮ ಜೀವಸಂಕುಲದ ಅಸ್ತಿತ್ವದ ಮೂಲ. ಇವುಗಳನ್ನು ರಕ್ಷಿಸುವುದು ಮತ್ತು ಮುಂದಿನ ಪೀಳಿಗೆಗೆ ದಾಟಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ. ಈ ಹೊತ್ತಿಗೆಯು ಆ ಜವಾಬ್ದಾರಿಯನ್ನು ಪ್ರತಿಯೊಬ್ಬ ಓದುಗನಲ್ಲೂ ಜಾಗೃತಗೊಳಿಸುತ್ತದೆ ಎಂಬ ನಂಬಿಕೆ ನನಗಿದೆ. ಪ್ರವಾಸವು ಮನುಷ್ಯನನ್ನು ವಿನಮ್ರನನ್ನಾಗಿ ಮಾಡುತ್ತದೆ. ಜಗತ್ತು ಎಷ್ಟು ವಿಶಾಲವಾಗಿದೆ ಮತ್ತು ಅದರ ಮುಂದೆ ತಾನು ಎಷ್ಟು ಸಣ್ಣವನು ಎಂಬ ಸತ್ಯದ ದರ್ಶನ ಪ್ರವಾಸಿಗನಿಗಾಗುತ್ತದೆ. ಈ ಕೃತಿಯ ಪುಟಗಳನ್ನು ತಿರುವಿದಾಗ ಓದುಗರು ಕೇವಲ ಮಾಹಿತಿಯನ್ನು ಪಡೆಯದೆ, ಆಯಾ ಸ್ಥಳಗಳ ಅನುಭೂತಿಯನ್ನು ಪಡೆಯಲಿ ಎಂಬುದು ನನ್ನ ಆಶಯ. ಆಗ ಮಾತ್ರ ಗೊರೂರು ಅನಂತರಾಜುರವರು ಹೊರತರುತ್ತಿರುವ ಈ ಕೃತಿಯ ಉದ್ದೇಶ ಸಾಧಿತವಾದಂತೆ. ಕಾಲದ ಪ್ರವಾಹದಲ್ಲಿ ಅಳಿಯದೆ ಉಳಿದಿರುವ ಈ ಐತಿಹಾಸಿಕ ಮತ್ತು ನೈಸರ್ಗಿಕ ತಾಣಗಳತ್ತ ಒಂದು ಅರ್ಥಪೂರ್ಣ ಪಯಣ ಬೆಳೆಸಲು ಈ ಕೃತಿ ನಿಮಗೆ ಪ್ರೇರಣೆಯಾಗಲಿ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248